ಕರ್ನಾಟಕ ಸರ್ಕಾರ

ಸಂ: ಇಡಿ 269 ಯುಬಿವಿ 2025

ಕರ್ನಾಟಕ ಸರ್ಕಾರ ಸಚಿವಾಲಯ,
ಡಾ.ಬಿ.ಆರ್. ಅಂಬೇಡ್ಕರ್ ವೀದಿ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 07.08.2025

ಇಂದ
ಸರ್ಕಾರದ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಡಾ.ಬಿ.ಆರ್. ಅಂಬೇಡ್ಕರ್ ವೀದಿ
ಬಹುಮಹಡಿಗಳ ಕಟ್ಟಡ
ಬೆಂಗಳೂರು

ಇವರಿಗೆ
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಜ್ಞಾನಭಾರತಿ, ಬೆಂಗಳೂರು.

ಮಾನ್ಯರೇ,

ವಿಷಯ: ಬೆಂಗಳೂರು ವಿಶ್ವವಿದ್ಯಾಲಯದ ದಯಾನಂದ ಸಾಗರ್ ಸಂಜೆ ಕಾಲೇಜ್ ಆಫ್ ಆರ್ಟ್ಸ್ ಅಂಡ್ ಕಾಮರ್ಸ್, ಶಾವಿಗೆ ಮಲ್ಲೇಶ್ವರ ಬೆಟ್ಟ, ಕುಮಾರಸ್ವಾಮಿ ಬಡಾವಣೆ, ಬೆಂಗಳೂರು-560078 ಇಲ್ಲಿಗೆ 2025-26ನೇ ಶೈಕ್ಷಣಿಕ ಸಾಲಿಗೆ ಹೊಸ ಕೋರ್ಸಿಗೆ ಸಂಯೋಜನೆ ಮಂಜೂರಾತಿ ನೀಡುವ ಕುರಿತು.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ:ಇಡಿ 29 ಯುಎನ್ಇ 2021, ದಿನಾಂಕ:12.02.2021, ದಿನಾಂಕ 16.02.2021.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 384 ಯುಎನ್ಇ 2020, ದಿನಾಂಕ 18.02.2022
3. ತಮ್ಮ ಪತ್ರ ಸಂಖ್ಯೆ: ಎಸಿಎ-3/DSECA&C/ಹೊಕೋಸಂ/2025-26, ದಿ:26.05.2025 (AFF/215/AF/P20GCK0056/2025-26/12787)

---

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ, ಬೆಂಗಳೂರು ವಿಶ್ವವಿದ್ಯಾಲಯದ ದಯಾನಂದ ಸಾಗರ್ ಸಂಜೆ ಕಾಲೇಜ್ ಆಫ್ ಆರ್ಟ್ಸ್ ಅಂಡ್ ಕಾಮರ್ಸ್, ಶಾವಿಗೆ ಮಲ್ಲೇಶ್ವರ ಬೆಟ್ಟ, ಕುಮಾರಸ್ವಾಮಿ ಬಡಾವಣೆ, ಬೆಂಗಳೂರು-560078 ಇಲ್ಲಿ 2025-26ನೇ ಶೈಕ್ಷಣಿಕ ಸಾಲಿಗೆ ಬಿ.ಸಿ.ಎ (ಕಂಪ್ಯೂಟರ್ ಅಪ್ಲಿಕೇಷನ್) ಹೊಸ ಕೋರ್ಸನ್ನು ಹೊಸದಾಗಿ ಆರಂಭಿಸಲು ಸಂಯೋಜನೆ ನೀಡುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59ರಲ್ಲಿ ಗೊತ್ತುಪಡಿಸಲಾದ ಪ್ರಕ್ರಿಯೆಯನ್ನು ಉಲ್ಲೇಖ(1)ರ ಆದೇಶದಲ್ಲಿನ ಹಾಗೂ ಉಲ್ಲೇಖ(2)ರ ಸುತ್ತೋಲೆಯಲ್ಲಿನ ಸಂಯೋಜನಾ ಮಾರ್ಗಸೂಚಿಗಳನ್ನು ಅನುಸರಿಸಿ ಆನ್‌ಲೈನ್ ವ್ಯವಸ್ಥೆಯಡಿ ಜರುಗಿಸಿದ ತರುವಾಯ ಪೂರ್ವೋಕ್ತ ಅಧಿನಿಯಮದ ಪ್ರಕರಣ 59(11)ರಡಿ ಅವಶ್ಯಕವಾದ ಸರ್ಕಾರದ ಶಿಫಾರಸ್ಸು ಕೋರಿ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾ ವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ ಉಲ್ಲೇಖ (3)ರ ಪತ್ರದನ್ವಯ ಆನ್‌ಲೈನ್ ಮಾರ್ಗದಲ್ಲಿ ಸಲ್ಲಿಸಲಾದ ಪ್ರಸ್ತಾವನೆಯನ್ನು ಕೂಲಕಂಷವಾಗಿ ಸಂವೀಕ್ಷಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ /ಭೌತಿಕ

...2

ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ಪರಿಶೀಲಿಸಿ ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ಆದುದರಿಂದ, ದಯಾನಂದ ಸಾಗರ್ ಸಂಜೆ ಕಾಲೇಜ್ ಆಫ್ ಆರ್ಟ್ಸ್ ಅಂಡ್ ಕಾಮರ್ಸ್, ಶಾವಿಗೆ ಮಲ್ಲೇಶ್ವರ ಬೆಟ್ಟ, ಕುಮಾರಸ್ವಾಮಿ ಬಡಾವಣೆ, ಬೆಂಗಳೂರು-560078 ಇಲ್ಲಿ 2025-26ನೇ ಶೈಕ್ಷಣಿಕ ಸಾಲಿಗೆ ಬಿ.ಸಿ.ಎ (ಕಂಪ್ಯೂಟರ್ ಅಪ್ಲಿಕೇಷನ್) ಹೊಸ ಕೋರ್ಸಿಗೆ ಸಂಯೋಜನೆ ನೀಡುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ಹೊಸ ಕೋರ್ಸು ಸಂಯೋಜನೆ:-

| ಕ್ರ.ಸಂ | ವಿಷಯ | ಭಾಷಾ ಸಮೂಹ | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | ಬಿ.ಸಿ.ಎ | ಕಂಪ್ಯೂಟರ್ ಅಪ್ಲಿಕೇಷನ್ | 60 |

ಅರ್ಹ ಸಿಬ್ಬಂದಿಗಳನ್ನು ನೇಮಿಸಿಕೊಳ್ಳುವುದು, ಪ್ರತಿ ವಿದ್ಯಾರ್ಥಿಗೆ ಲಭ್ಯವಾಗುವ ತಲಾವಾರು ಪ್ರಯೋಗಾಲಯ ಪ್ರದೇಶ, ಪ್ರತಿ ವಿದ್ಯಾರ್ಥಿಗೆ ಲಭ್ಯವಾಗುವ ತಲಾವಾರು ಗ್ರಂಥಾಲಯ ಪ್ರದೇಶ, ಗ್ರಂಥಾಲಯದಲ್ಲಿರುವ ಪುಸ್ತಕಗಳ ಸಂಖ್ಯೆ, ಪರಿಶಿಷ್ಟಜಾತಿ/ಪಂಗಡಗಳಿಗೆ ಪುಸ್ತಕ ಭಂಡಾರ ಅಗತ್ಯತೆ, ಯುಜಿಸಿ ವಿನಿಯಮಗಳನ್ವಯ ಮುಚ್ಚಳಿಕೆಯ ಕಾರ್ಯಗತಗೊಳಿಸುವಿಕೆ ಕುರಿತಾದ ಮಾನದಂಡಗಳನ್ನು ಪೂರೈಸುವುದು.

ದಯಾನಂದ ಸಾಗರ್ ಸಂಜೆ ಕಾಲೇಜ್ ಆಫ್ ಆರ್ಟ್ಸ್ ಅಂಡ್ ಕಾಮರ್ಸ್, ಶಾವಿಗೆ ಮಲ್ಲೇಶ್ವರ ಬೆಟ್ಟ, ಕುಮಾರಸ್ವಾಮಿ ಬಡಾವಣೆ, ಬೆಂಗಳೂರು-560078 ಇಲ್ಲಿಗೆ ಬಿ.ಸಿ.ಎ (ಕಂಪ್ಯೂಟರ್ ಅಪ್ಲಿಕೇಷನ್) ಹೊಸ ಕೋರ್ಸಿಗೆ ಹೊಸ ಸಂಯೋಜನೆ ನೀಡುವುದು ಪೂರ್ವೋಕ್ತ ಷರತ್ತುಗಳು ಹಾಗೂ ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಹೊಸ ಸಂಯೋಜನೆಯ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

(1) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 59 ರಲ್ಲಿನ ಮಾನದಂಡಗಳು ಹಾಗೂ ಹೊಸ ಕೋರ್ಸ್ ಪ್ರಾರಂಭಿಸುವ ಕುರಿತು, ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು ಸಂಬಂಧಿಸಿದ ಕಾಲೇಜು ಪಾಲಿಸಿವೆಯೇ ಎಂಬುದರ ಕುರಿತಾಗಿ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಸಂಬಂಧಿಸಿದ ವಿಶ್ವವಿದ್ಯಾಲಯವು ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ED 29 UNE 2021 Date 12.02.2021, ಮತ್ತು ಇಡಿ 218 ಯುಎನ್ಇ 2020, ದಿನಾಂಕ:24.08.2020 ರಲ್ಲಿನ ಷರತ್ತುಗಳನ್ನು 06(ಆರು) ತಿಂಗಳೊಳಗಾಗಿ ಪೂರೈಸುವ ಷರತ್ತಿಗೊಳಪಟ್ಟಿದೆ.

(2) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

(3) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

(4) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ.

(5) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

(6) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

(7) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

(8) ದಿನಾಂಕ:13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offense) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

(9) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

(10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 06 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

(11) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

(12) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

(13) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

ಕೆ. ಮಂಜುನಾಥ 7/8/16

(ಕೆ. ಮಂಜುನಾಥ)

ಸರ್ಕಾರದ ಅಧೀನ ಕಾರ್ಯದರ್ಶಿ

ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2)

**ಪ್ರತಿ:**

(1) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು-560 001

(2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು

(3) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು

(4) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.

(5) ಪ್ರಾಂಶುಪಾಲರು, ದಯಾನಂದ ಸಾಗರ್ ಸಂಜೆ ಕಾಲೇಜ್ ಆಫ್ ಆರ್ಟ್ಸ್ ಅಂಡ್ ಕಾಮರ್ಸ್, ಶಾವಿಗೆ ಮಲ್ಲೇಶ್ವರ ಬೆಟ್ಟ, ಕುಮಾರಸ್ವಾಮಿ ಬಡಾವಣೆ, ಬೆಂಗಳೂರು-560078.

(6) ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ(ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)

----